ಅನ್ವಯಿಸುತ್ತದೆ. ಆದರೆ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಆಯ್ಕೆ ಹಾಗೂ ಅವಿಶ್ವಾಸ ನಿರ್ಣಯ ಸಭೆಗಳಲ್ಲಿ ಮತದಾನದ ಹಕ್ಕು ಇರುವುದಿಲ್ಲ.

3. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 180, 181, 256, 278, 279, 280, 285, 286, 300 ಮತ್ತು 309ರಲ್ಲಿ ತಿಳಿಸಿರುವಂತೆ ಜಿಲ್ಲಾ ಪಂಚಾಯತ್ ಸದಸ್ಯರುಗಳು ತಮ್ಮ ಹೊಣೆಗಾರಿಕೆ ಮತ್ತು ಕರ್ತವ್ಯಗಳನ್ನು ನಿರ್ವಹಿಸಬೇಕಾಗುತ್ತದೆ.

ರಾಜ್ಯದಲ್ಲಿನ ಜಿಲ್ಲಾ ಪಂಚಾಯತ್‌ಗಳಿಗೆ ''ಟ್ರಾನ್ಸ್‌ಫರೆನ್ಸಿ ಆಕ್ಟ್'' ಅನ್ವಯಿಸುವ ಬಗ್ಗೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 180(367)

ಸದಸ್ಯರ ಹೆಸರು: ಶ್ರೀ ಆತ್ಮಾನಂದ ಎಂ.ಎಸ್.(ಮಂಡ್ಯ)

ಉತ್ತರಿಸುವ ಸಚಿವರು: ಶ್ರೀ ಎಂ.ವೈ.ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು)

ಪ್ರಶ್ನೆ

1. ರಾಜ್ಯದಲ್ಲಿನ ಜಿಲ್ಲಾ ಪಂಚಾಯತಿಗಳು ''ಟ್ರಾನ್ಸ್‌ಫರೆನ್ಸಿ ಆ್ಯಕ್ಟ್''ನ ನಿಬಂಧನೆಗಳ ಪ್ರಕಾರ ಕಾರ್ಯ ನಿರ್ವಹಿಸುತ್ತಿವೆಯೇ?

2. ಹಾಗಿದ್ದಲ್ಲಿ ಮಂಡ್ಯ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಯಾವ ಯಾವ ಇಲಾಖೆಗಳಲ್ಲಿ ಈ ನಿಬಂಧನೆಗಳನ್ನು ಅನುಷ್ಠಾನಕ್ಕೆ ತರಲಾಗಿದೆ?

3. ಅನುಷ್ಠಾನಕ್ಕೆ ತಂದಿರುವ ವಿಷಯಗಳ ಬಗ್ಗೆ ಸವಿವರವಾದ ಮಾಹಿತಿ ನೀಡುವುದು?

ಉತ್ತರ

1. ಹೌದು.

2. 2000-01ನೇ ಸಾಲಿನಿಂದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗಗಳಲ್ಲಿ ಈ ನಿಯಮಗಳ ನಿಬಂಧನೆಗಳನ್ನು ಅನುಷ್ಠಾನಕ್ಕೆ

ತರಲಾಗಿದೆ. ಉಳಿದ ಇಲಾಖೆಗಳಿಗೆ ಖರೀದಿ ಇನ್ನೂ ಪೂರ್ಣಗೊಂಡಿರುವುದಿಲ್ಲ ಆದಾಗ್ಯೂ ಈ ನಿಯಮಗಳನ್ನು ಪಾಲಿಸಲಾಗುವುದು.

3. ಈ ಕೆಳಗಿನ ಇಲಾಖೆಗಳು 2000-01ನೇ ಸಾಲಿನಲ್ಲಿ ನಿಯಮಗಳನ್ವಯ ಸಾಮಗ್ರಿಗಳನ್ನು ಖರೀದಿಸಿರುತ್ತವೆ.

(ರೂ.ಲಕ್ಷಗಳಲ್ಲಿ)

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ	ರೂ. 16.21
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ	ರೂ. 55.50
ಶಿಕ್ಷಣ ಇಲಾಖೆ	ರೂ. 17.00
ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗ	ರೂ.219.95
2001-02:	
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ಶೇ.60 ಭಾಗದ ಔಷಧಿಗಳನ್ನು ಖರೀದಿಸಲಾಗಿದೆ)	ರೂ. 40.44

ರಾಜ್ಯದಲ್ಲಿ ನಕಲಿ ವೈದ್ಯರುಗಳ ಬಗ್ಗೆ ಸರ್ಕಾರದ ಕ್ರಮ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 181(368)

ಸದಸ್ಯರ ಹೆಸರು: ಶ್ರೀ ಆತ್ಮಾನಂದ ಎಂ.ಎಸ್.(ಮಂಡ್ಯ)

ಉತ್ತರಿಸುವ ಸಚಿವರು: ಡಾ.ಎ.ಬಿ.ಮಾಲಕರೆಡ್ಡಿ(ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಪ್ರಶ್ನೆ

ಅ) ರಾಜ್ಯದಲ್ಲಿ ನಕಲಿ ವೈದ್ಯರ ಸಂಖ್ಯೆ ದಿನೇ ದಿನೇ ಹೆಚ್ಚಳವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ರಾಜ್ಯದಲ್ಲಿನ ವೈದ್ಯಕೀಯ ಸಂಘವು "ನಕಲಿ ವೈದ್ಯರ" ಸಮಸ್ಯೆ ಕುರಿತಂತೆ